**All India Radio: Bangalore**
**National Bulletin In Kannada**
**29.10.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಸಾಗರ ವಲಯ ಭಾರತದ ಅಭಿವೃದ್ಧಿಗೆ ಚಾಲನೆ ನೀಡುತ್ತಿದೆ - ಪ್ರಧಾನಿ ನರೇಂದ್ರ ಮೋದಿ
2. ಭಾರತದ ವಿದೇಶಾಂಗ ಸಚಿವರನ್ನು ಭೇಟಿ ಮಾಡಿದ ಐರೋಪ್ಯ ಸಂಸತ್ತಿನ ಅಂತಾರಾಷ್ಟ್ರೀಯ ವ್ಯಾಪಾರ ಸಮಿತಿ ನಿಯೋಗ
3. ಬಿಹಾರದ ಮುಜಫರ್ ಪುರದಿಂದ ಚುನಾವಣಾ ಪ್ರಚಾರ ಆರಂಭಿಸಿದ ವಿಪಕ್ಷ ನಾಯಕ ರಾಹುಲ್ ಗಾಂಧಿ
4. ಟಿ-೨೦ ಕ್ರಿಕೆಟ್ ; ಮಳೆಯಿಂದ ರದ್ದಾದ ಭಾರತ-ಆಸ್ಟ್ರೇಲಿಯಾ ಪಂದ್ಯ ; ಅತಿ ಹೆಚ್ಚು ಸಿಕ್ಸರ್ ಬಾರಿಸಿ ದಾಖಲೆ ನಿರ್ಮಿಸಿದ ಸೂರ್ಯಕುಮಾರ್ ಯಾದವ್

<><><><>

ಸಾಗರ ವಲಯವು ಭಾರತದ ಬೆಳವಣಿಗೆಗೆ ಚಾಲನೆ ನೀಡುತ್ತಿದೆ. ಕಳೆದ ದಶಕದಲ್ಲಿ, ಈ ವಲಯವು ಗಮನಾರ್ಹವಾಗಿ ರೂಪಾಂತರಗೊಂಡಿದೆ, ವ್ಯಾಪಾರ ಮತ್ತು ಬಂದರು ಮೂಲಸೌಕರ್ಯವನ್ನು ಹೆಚ್ಚಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನ ನೆಸ್ಕೋ ಪ್ರದರ್ಶನ ಕೇಂದ್ರದಲ್ಲಿ ಇಂದು ಇಂಡಿಯಾ ಮ್ಯಾರಿಟೈಮ್ ವೀಕ್ ೨೦೨೫ ರ ಅಡಿಯಲ್ಲಿ ಆಯೋಜಿಸಲಾದ ಸಾಗರ ನಾಯಕರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಸಾಗರ ವಲಯವು ಹೆಚ್ಚಿನ ವೇಗ ಮತ್ತು ಶಕ್ತಿಯೊಂದಿಗೆ ಮುಂದುವರಿಯುತ್ತಿದೆ. ಭಾರತದ ಬಂದರುಗಳು ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಅತ್ಯಂತ ಪರಿಣಾಮಕಾರಿ ಎಂದು ಪರಿಗಣಿಸಲ್ಪಟ್ಟಿವೆ. ಅನೇಕ ಅಂಶಗಳಲ್ಲಿ, ಅವು ಅಭಿವೃದ್ಧಿ ಹೊಂದಿದ ರಾಷ್ಟ್ರಗಳಿಗಿಂತ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ಹೇಳಿದರು. ಜಾಗತಿಕ ಉದ್ವಿಗ್ನತೆ, ವ್ಯಾಪಾರ ಅಡಚಣೆಗಳು ಮತ್ತು ಬದಲಾಗುತ್ತಿರುವ ಪೂರೈಕೆ ಸರಪಳಿಗಳ ನಡುವೆ, ಭಾರತವು ಕಾರ್ಯತಂತ್ರದ ಸ್ವಾಯತ್ತತೆ, ಶಾಂತಿ ಮತ್ತು ಅಂತರ್ಗತ ಬೆಳವಣಿಗೆಯ ಸಂಕೇತವಾಗಿ ನಿಂತಿದೆ ಎಂದು ಪ್ರಧಾನಿ ತಿಳಿಸಿದರು.

**ಧ್ವನಿ : ಪ್ರಧಾನಮಂತ್ರಿ ನರೇಂದ್ರ ಮೋದಿ**

<><><><>

ಐರೋಪ್ಯ ಸಂಸತ್ತಿನ ಅಂತಾರಾಷ್ಟ್ರೀಯ ವ್ಯಾಪಾರ ಸಮಿತಿಯ ನಿಯೋಗವು ಇಂದು ನವದೆಹಲಿಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಿತು.

ಭಾರತ ಮತ್ತು ಯುರೋಪಿಯನ್ ಒಕ್ಕೂಟವು ಹೇಗೆ ಒಮ್ಮತವನ್ನು ಹೆಚ್ಚಿಸಬಹುದು ಮತ್ತು ಸಹಕಾರವನ್ನು ಹೇಗೆ ಗಾಢಗೊಳಿಸಬಹುದು ಎಂಬುದರ ಕುರಿತು ಚರ್ಚಿಸಿದ್ದಾರೆ. ಇದು ಜಾಗತಿಕ ಆರ್ಥಿಕತೆಯನ್ನು ಸ್ಥಿರಗೊಳಿಸುತ್ತದೆ ಮತ್ತು ಪ್ರಜಾಪ್ರಭುತ್ವ ಶಕ್ತಿಗಳನ್ನು ಬಲಪಡಿಸುತ್ತದೆ. ಭಾರತ-ಯುರೋಪಿಯನ್ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ಆರಂಭಿಕ ತೀರ್ಮಾನವು ಈ ಉದ್ದೇಶಗಳಿಗೆ ದೊಡ್ಡ ವ್ಯತ್ಯಾಸವನ್ನುಂಟು ಮಾಡುತ್ತದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ಬಿಹಾರದ ಮುಜಫರ್‌ಪುರದಿಂದ ಕಾಂಗ್ರೆಸ್‌ನ ಹಿರಿಯ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಮಹಾಘಟಬಂಧನ್‌ಗಾಗಿ ತಮ್ಮ ಚುನಾವಣಾ ಪ್ರಚಾರವನ್ನು ಪ್ರಾರಂಭಿಸಿದರು. ಮುಜಫರ್‌ಪುರದ ಸಕ್ರಾದಲ್ಲಿ ಸಾರ್ವಜನಿಕ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಬಿಜೆಪಿ ನಿತೀಶ್ ಕುಮಾರ್ ಅವರ ಮುಖವನ್ನು ಬಳಸಿಕೊಂಡು ರಿಮೋಟ್ ಕಂಟ್ರೋಲ್ ಮೂಲಕ ಸರ್ಕಾರವನ್ನು ನಡೆಸುತ್ತಿದೆ ಎಂದು ಆರೋಪಿಸಿದರು. ಬಿಜೆಪಿಗೆ ಸಾಮಾಜಿಕ ನ್ಯಾಯದ ಬಗ್ಗೆ ಯಾವುದೇ ಕಾಳಜಿ ಇಲ್ಲ ಎಂದು ಅವರು ಆರೋಪಿಸಿದರು, ಅದಕ್ಕಾಗಿಯೇ ಪ್ರಧಾನಿ ನರೇಂದ್ರ ಮೋದಿ ಜಾತಿ ಜನಗಣತಿಯನ್ನು ವಿರೋಧಿಸಿದರು ಎಂದು ಹೇಳಿದರು. ಬಿಹಾರದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವುದು ಮತ್ತು ಅಧಿಕಾರಕ್ಕೆ ಬಂದರೆ ರಾಜ್ಯದ ಜನರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಮಹಾಘಟಬಂಧನ್ ಗುರಿಯಾಗಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ನೋಟು ರದ್ದತಿ ಮತ್ತು ದೋಷಪೂರಿತ ಸರಕು ಮತ್ತು ಸೇವಾ ತೆರಿಗೆ ನೀತಿಯ ಮೂಲಕ ಎನ್‌ಡಿಎ ಸರ್ಕಾರ ಸಣ್ಣ ವ್ಯಾಪಾರಿಗಳಿಗೆ ಹಾನಿ ಮಾಡುತ್ತಿದೆ ಎಂದು ಅವರು ಆರೋಪಿಸಿದರು.

<><><><>

ಭಾರತ-ರಷ್ಯಾ ಮಿಲಿಟರಿ ಮತ್ತು ಮಿಲಿಟರಿ ತಾಂತ್ರಿಕ ಸಹಕಾರದ ಅಂತರ-ಸರ್ಕಾರಿ ಆಯೋಗದ ಮಿಲಿಟರಿ ಸಹಕಾರದ ಕುರಿತ ಕಾರ್ಯನಿರತ ಗುಂಪಿನ ೫ನೇ ಸಭೆ ಇಂದು ನವದೆಹಲಿಯಲ್ಲಿ ನಡೆಯಿತು. ಸಭೆಯಲ್ಲಿ, ಎರಡೂ ಕಡೆಯ ನಡುವೆ ನಡೆಯುತ್ತಿರುವ ರಕ್ಷಣಾ ಕಾರ್ಯಯೋಜನೆಗಳನ್ನು ಬಲಪಡಿಸುವ ಬಗ್ಗೆ ಚರ್ಚೆಗಳು ಕೇಂದ್ರೀಕರಿಸಿದವು ಮತ್ತು ಅಸ್ತಿತ್ವದಲ್ಲಿರುವ ದ್ವಿಪಕ್ಷೀಯ ಸಹಕಾರ ಕಾರ್ಯವಿಧಾನದ ವ್ಯಾಪ್ತಿಯಲ್ಲಿ ಹೊಸ ಉಪಕ್ರಮಗಳ ಕುರಿತು ಚರ್ಚಿಸಲಾಯಿತು.

<><><><>

ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಇಂದು ನವದೆಹಲಿಯಲ್ಲಿ ನೇಪಾಳದ ಇಂಧನ ಸಚಿವ ಕುಲ್ಮನ್ ಘಿಸಿಂಗ್ ಅವರನ್ನು ಭೇಟಿಯಾದರು. ಈ ಸಭೆಯಲ್ಲಿ ಭಾರತದ ಸಾರ್ವಜನಿಕ ವಲಯದ

ಉದ್ಯಮವಾದ ಪವರ್‌ಗ್ರಿಡ್ ಮತ್ತು ನೇಪಾಳ ವಿದ್ಯುತ್ ಪ್ರಾಧಿಕಾರದ ನಡುವೆ ಜಂಟಿ ಉದ್ಯಮ ಮತ್ತು ಷೇರುದಾರರ ಒಪ್ಪಂದಗಳಿಗೆ ಸಹಿ ಹಾಕಲಾಯಿತು ಎಂದು ಇಂಧನ ಸಚಿವಾಲಯ ತಿಳಿಸಿದೆ. ವಿದ್ಯುತ್ ಕ್ಷೇತ್ರದಲ್ಲಿ ಎರಡೂ ರಾಷ್ಟ್ರಗಳ ನಡುವೆ ನಡೆಯುತ್ತಿರುವ ಸಹಕಾರವನ್ನು ಬಲಪಡಿಸುವತ್ತ ಸಭೆ ಗಮನಹರಿಸಲಾಗಿದೆ. ಗಡಿಯಾಚೆಗಿನ ವಿದ್ಯುತ್ ವ್ಯಾಪಾರವನ್ನು ಸುಗಮಗೊಳಿಸುವ, ಇಂಧನ ಭದ್ರತೆಯನ್ನು ಬಲಪಡಿಸುವ ಮತ್ತು ಎರಡೂ ದೇಶಗಳ ನಡುವೆ ಶುದ್ಧ ಇಂಧನ ಸಂಪನ್ಮೂಲಗಳ ಹೆಚ್ಚಿನ ಏಕೀಕರಣವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಪ್ರಾದೇಶಿಕ ಗ್ರಿಡ್ ಸಂಪರ್ಕ ಉಪಕ್ರಮಗಳ ಕುರಿತು ಉಭಯ ದೇಶಗಳ ಸಚಿವರು ಚರ್ಚಿಸಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<><><><>

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಸ್ಮರಣಾರ್ಥ ಈ ತಿಂಗಳ ೩೧ರಂದು ದೇಶಾದ್ಯಂತ ಏಕತೆಗಾಗಿ ಓಟವನ್ನು ಆಯೋಜಿಸಲಾಗುತ್ತಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ದೇಶವಾಸಿಗಳನ್ನು ಈ ಓಟದಲ್ಲಿ ಭಾಗವಹಿಸುವಂತೆ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಮತ್ತು ಅವರ ಏಕೀಕೃತ ಭಾರತದ ದೃಷ್ಟಿಕೋನವನ್ನು ಗೌರವಿಸುವಂತೆ ಕೋರಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಹರಿಯಾಣದ ಅಂಬಾಲಾದ ವಾಯುಪಡೆ ನಿಲ್ದಾಣದಿಂದ ರಫೇಲ್ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದರು. ಸುಮಾರು ೨೫ ನಿಮಿಷಗಳ ಕಾಲ ಹಾರಾಟ ನಡೆಯಿತು. ಇಂದು ಬೆಳಿಗ್ಗೆ ವಾಯುಪಡೆ ನಿಲ್ದಾಣಕ್ಕೆ ಆಗಮಿಸಿದ ರಾಷ್ಟ್ರಪತಿಗಳಿಗೆ ಔಪಚಾರಿಕ ಗೌರವ ವಂದನೆ ಸಲ್ಲಿಸಲಾಯಿತು. ಇದಕ್ಕೂ ಮೊದಲು, ಅವರನ್ನು ವಾಯುಪಡೆಯ ಮುಖ್ಯಸ್ಥ ಅಮರ್‌ಪ್ರೀತ್ ಸಿಂಗ್, ಹರಿಯಾಣ ಕ್ಯಾಬಿನೆಟ್ ಸಚಿವ ಅನಿಲ್ ವಿಜ್, ಅಂಬಾಲಾ ಉಪ ಆಯುಕ್ತ ಅಜಯ್ ಸಿಂಗ್ ತೋಮರ್ ಮತ್ತು ಇತರ ಅನೇಕ ಅಧಿಕಾರಿಗಳು ಸ್ವಾಗತಿಸಿದರು. ಏಪ್ರಿಲ್ ೨೦೨೩ರಲ್ಲಿ, ಭಾರತೀಯ ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ರಾಷ್ಟ್ರಪತಿ ಮುರ್ಮು ಅಸ್ಸಾಂನ ತೇಜ್‌ಪುರ ವಾಯುಪಡೆ ನಿಲ್ದಾಣದಲ್ಲಿ ಸುಖೋಯ್-೩೦ ಎಂಕೆಐ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದರು.

<><><><>

ಎರಡನೇ ತ್ರೈಮಾಸಿಕದಲ್ಲಿ ಅಂಚೆ ವಲಯಗಳು ಮೂರು ಸಾವಿರದ ೩೨೪ ಕೋಟಿ ರೂಪಾಯಿಗಳೊಂದಿಗೆ ಪ್ರಭಾವಶಾಲಿ ಕಾರ್ಯಕ್ಷಮತೆಯನ್ನು ತೋರಿಸಿವೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ಅಂಚೆ ಇಲಾಖೆಯ ವಾರ್ಷಿಕ ವ್ಯವಹಾರ ಯೋಜನೆ ಪ್ರಸಕ್ತ ಸಾಲಿನ ತ್ರೈಮಾಸಿಕ ಪರಿಶೀಲನೆಯ ನಂತರ

ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಇದು ಸುಮಾರು ೪ ಸಾವಿರದ ೨೦೦ ಕೋಟಿ ರೂಪಾಯಿಗಳ ಗುರಿಯ ಸುಮಾರು ೮೦ ಪ್ರತಿಶತದಷ್ಟಿದೆ. ದೆಹಲಿ ೧೪೯ ಪ್ರತಿಶತ ಮತ್ತು ತೆಲಂಗಾಣ ೧೧೨ ಪ್ರತಿಶತದೊಂದಿಗೆ ತಮ್ಮ ನಿಗದಿತ ಗುರಿಗಳನ್ನು ಮೀರಿ ಉತ್ತಮ ಅಭಿವೃದ್ಧಿ ತೋರಿಸಿವೆ. ಪಾರ್ಸೆಲ್‌ಗಳು, ಅಂತಾರಾಷ್ಟ್ರೀಯ ಮತ್ತು ಜಾಗತಿಕ ವ್ಯವಹಾರದಂತಹ ಕೆಲವು ಕ್ಷೇತ್ರಗಳು ಶೇಕಡಾ ೫೦ಕ್ಕಿಂತ ಕಡಿಮೆ ಗುರಿ ಸಾಧಿಸಿದೆ ಎಂದು ಅವರು ಹೇಳಿದರು. ಇದರಿಂದಾಗಿ ಅವು ಮುಂಬರುವ ವರ್ಷಗಳಲ್ಲಿ ಒಟ್ಟು ಆದಾಯದ ಕನಿಷ್ಠ ಶೇಕಡಾ ೭೫ ರಷ್ಟು ಕೊಡುಗೆ ನೀಡುತ್ತವೆ.

<><><><>

ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್ ರೆಡ್ಡಿ ಇಂದು ನವದೆಹಲಿಯಲ್ಲಿ ೧೪ನೇ ಕಂತಿನ ವಾಣಿಜ್ಯ ಕಲ್ಲಿದ್ದಲು ಗಣಿ ಹರಾಜಿಗೆ ವರ್ಚುವಲ್ ಮೂಲಕ ಚಾಲನೆ ನೀಡಿದರು.  ಈ ಸಂದರ್ಭದಲ್ಲಿ ಮಾತನಾಡಿದ ಅವರು, ವ್ಯಾಪಾರ ಮಾಡುವ ಸುಲಭತೆಯನ್ನು ಉತ್ತೇಜಿಸುವುದು, ವೈವಿಧ್ಯಮಯ ಹೂಡಿಕೆಗಳನ್ನು ಆಕರ್ಷಿಸುವುದು ಮತ್ತು ವ್ಯಾಪಕ ಉದ್ಯಮ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಗುರಿಯನ್ನು ಈ ಹರಾಜು ಹೊಂದಿದೆ ಎಂದು ಒತ್ತಿ ಹೇಳಿದರು.

ಮೊದಲ ಬಾರಿಗೆ ಕಲ್ಲಿದ್ದಲು ಮತ್ತು ಗಣಿ ಸಚಿವಾಲಯವು ಭೂಮಿಯೊಳಗಿನ ಕಲ್ಲಿದ್ದಲು ಹರಾಜು ಚೌಕಟ್ಟಿನೊಳಗೆ ಅನಿಲೀಕರಣಕ್ಕಾಗಿ ನಿಬಂಧನೆಗಳನ್ನು ಸೇರಿಸಿದೆ ಎಂದು ಸಚಿವರು ಹೇಳಿದರು.

<><><><>

ಕ್ಯಾನ್ ಬೆರಾದಲ್ಲಿ ನಡೆದ ಭಾರತ ಮತ್ತು ಆಸ್ಟ್ರೇಲಿಯಾ ತಂಡ ನಡುವಿನ ಟಿ ೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಮಳೆಯ ಕಾರಣದಿಂದ ರದ್ದಾಗಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೧.೪೫ ಕ್ಕೆ ಆರಂಭವಾದ ಪಂದ್ಯದಲ್ಲಿ ಟಾಸ್ ಗೆದ್ದ ಆಸ್ಟ್ರೇಲಿಯಾ ಫೀಲ್ಡಿಂಗ್ ಆಯ್ದುಕೊಂಡಿತ್ತು. ಮಳೆಯ ಕಾರಣದಿಂದ ಪಂದ್ಯವನ್ನು ೧೮ ಓವರ್ ಗಳಿಗೆ ಕಡಿತಗೊಳಿಸಿ ನಿಗದಿಗೊಳಿಸಲಾಯಿತು. ಭಾರತ ತಂಡ ೯.೪ ಓವರ್ ಗಳಲ್ಲಿ ೧ ವಿಕೆಟ್ ಕಳೆದುಕೊಂಡು ೯೭ ರನ್ ಗಳಿಸಿ ಆಡುತ್ತಿತ್ತು. ಆದರೆ ಪದೇ ಪದೇ ಭಾರೀ ಮಳೆಯ ಕಾರಣದಿಂದ ಪಂದ್ಯ ರದ್ದಾಯಿತು. ಈ ಪಂದ್ಯದಲ್ಲಿ ಎರಡು ಸಿಕ್ಸರ್ ಬಾರಿಸಿದ ಸೂರ್ಯಕುಮಾರ್ ಯಾದವ್ ಟಿ-೨೦ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಸಿಕ್ಸರ್ ಬಾರಿಸಿದ ೨ನೇ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಟಿ-೨೦ ಪಂದ್ಯಗಳಲ್ಲಿ ಇದುವರೆಗೆ ೧೫೦ ಸಿಕ್ಸರ್ ಬಾರಿಸಿದ ವಿಶ್ವದ ೫ನೇ ಹಾಗೂ ಭಾರತದ ೨ನೇ ಆಟಗಾರ ಎಂಬ ದಾಖಲೆ ಬರೆದಿದ್ದಾರೆ. ೫ ಪಂದ್ಯಗಳ ಸರಣಿಯ ಭಾರತ ಮತ್ತು ಆಸ್ಟ್ರೇಲಿಯಾ ತಂಡದ ೨ನೇ ಪಂದ್ಯ ಮುಂಬರುವ ಶುಕ್ರವಾರ ಮೆಲ್ಬೋರ್ನ್ ನಲ್ಲಿ ನಡೆಯಲಿದೆ.

<><><><>

ಭಾರತವು ತನ್ನದೇ ಆದ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಪ್ರಮುಖ ಒಳಹರಿವುಗಳಿಗಾಗಿ ಕೆಲವು ಭೌಗೋಳಿಕ ಪ್ರದೇಶಗಳ ಮೇಲಿನ ಅತಿಯಾದ ಅವಲಂಬನೆಯನ್ನು ಕಡಿಮೆ ಮಾಡುವುದು ಅತ್ಯಗತ್ಯ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಟೈಕಾನ್ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತವು ಭವಿಷ್ಯಕ್ಕಾಗಿ ಹೊಸ ಆಲೋಚನೆಗಳು, ಉತ್ಪನ್ನಗಳು ಮತ್ತು ತಂತ್ರಜ್ಞಾನಗಳನ್ನು ಮುನ್ನಡೆಸುವ ಜಾಗತಿಕ ನಾವೀನ್ಯತೆಯ ಎಂಜಿನ್ ಆಗಿ ಹೊರಹೊಮ್ಮಿದೆ ಎಂದು ತಿಳಿಸಿದರು.

<><><><>

ಜರ್ಮನಿಯ ಸಾರ್ ಬ್ರುಕೇನ್ ನಲ್ಲಿ ನಡೆಯುತ್ತಿರುವ ಹೈಲೋ ಓಪನ್ ೨೦೨೫ ಪಂದ್ಯದ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಬ್ಯಾಡ್ಮಿಂಟನ್ ತಾರೆಯರಾದ ಲಕ್ಷ್ಯ ಸೇನ್, ಕಿರಣ್ ಜಾರ್ಜ್, ಉನ್ನತಿ ಹೂಡ ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>